# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 389 |
| 2 | ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 07-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ರಸ್ತೆಗಳು ತುಂಬಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ಹಿಂದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸರ್ಕಾರದ ವತಿಯಿಂದ ವಿವಿಧ ಯೋಜನೆಗಳಾದ ನಗರೋತ್ಥಾನ, ಮುಖ್ಯಮಂತ್ರಿಗಳ ನಗರೋತ್ಥಾನ, 110 ಹಳ್ಳಿಗಳು, ಶುಭ್ರ ಬೆಂಗಳೂರು ಯೋಜನೆ, ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಗಳಡಿ ಅನುಮೋದಿಸಲಾದ ಕ್ರಿಯಾ ಯೋಜನೆಗಳ ಕಾಮಗಾರಿಗಳ (ಘನತ್ಯಾಜ್ಯ ನಿರ್ವಹಣೆ, ಬೃಹತ್ ನೀರುಗಾಲುವೆ, ರಸ್ತೆ ಮೂಲಭೂತ ಸೌಕರ್ಯ, ವಾರ್ಡ್ ಕಾಮಗಾರಿಗಳು, ಕೆರೆಗಳ ಅಭಿವೃದ್ಧಿ, ಶಾಲೆ, ಆಸ್ಪತ್ರೆ, ಕಟ್ಟಡಗಳ ನಿರ್ಮಾಣ, ಮೇಲ್ಸೇತುವೆ, ಕೆಳಸೇತುವೆಗಳ ನಿರ್ಮಾಣ ಮೊದಲಾದ) ಬಿಲ್ ಪಾವತಿಗಾಗಿ ಪ್ರಸಕ್ತ ಸಾಲಿನಲ್ಲಿ ಅಂದರೆ 2023-24ನೇ ಸಾಲಿನಲ್ಲಿ ರೂ.1350.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ಇನ್ನುಳಿದಂತೆ ದಿನಾಂಕ: 03.07.2023ರ ಆದೇಶದಲ್ಲಿ ಚಂದಾಪುರ ಕೆರೆ ಪುನಶ್ಚೇತನಗೊಳಿಸಲು ರೂ.300.00 ಕೋಟಿಗಳನ್ನು ನೀಡಲಾಗಿದೆ. |
| ಆ) | ಬಂದಿದ್ದಲ್ಲಿ, ಬೃಹತ್ ಬೆಂಗಳೂರು ನಗರವನ್ನು ಅಭಿವೃದ್ಧಿ ಪಡಿಸಲು 2023-24ನೇ ಸಾಲಿನಲ್ಲಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ; | |
| ಇ) | ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿಗೆ ನೀಡಿರುವ ಅನುದಾನವು ಬಹಳ ಕಡಿಮೆಯಾಗಿರುವುದರಿಂದ ನಗರದಲ್ಲಿ ಪೂರ್ಣ ಪ್ರಮಾಣದಲ್ಲಿ ರಸ್ತೆಗಳ ಅಭಿವೃದ್ಧಿ ಹಾಗೂ ಚರಂಡಿಗಳ ನಿರ್ಮಾಣ ಹಾಗೂ ಮುಂತಾದ ಮೂಲಭೂತ ಸೌಕರ್ಯವನ್ನು ಒದಗಿಸಲು ಆಗದಿರುವುದರಿಂದ ಹೆಚ್ಚು ಅನುದಾನ ನೀಡಲು ಯಾವ ಕ್ರಮವನ್ನು ಕೈಗೊಂಡಿದೆ? | 1) 2023-24ನೇ ಸಾಲಿನ ಆಯವ್ಯಯದ ಕಂಡಿಕೆ (219) ರಲ್ಲಿ ಸರ್ವಜ್ಞನಗರ ಮತ್ತು ಸಿ.ವಿ.ರಾಮನ್ ನಗರ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಬೈಯಪ್ಪನಹಳ್ಳಿ ರೈಲ್ವೆ ಟರ್ಮಿನಲ್ ಸಂಪರ್ಕಿಸಲು ಮೇಲ್ಮಟ್ಟದ ರೋಟರಿ ಫ್ಲೈಓವರ್ ಅನ್ನು ರೂ.263.00 ಕೋಟಿಗಳಲ್ಲಿ ಕೈಗೆತ್ತಿಕೊಳ್ಳಲು ಪ್ರಸ್ತಾಪಿಸಲಾಗಿದೆ.<br><br>2) 2023-24ನೇ ಸಾಲಿನ ಅಯವ್ಯಯದ ಕಂಡಿಕೆ (220) ರಲ್ಲಿ ಬೆಂಗಳೂರು ನಗರದಲ್ಲಿ ರೂ.800.00 ಕೋಟಿಗಳ ವೆಚ್ಚದಲ್ಲಿ 100 ಕಿಮೀ ಉದ್ದದ ಮುಖ್ಯ ರಸ್ತೆಗಳನ್ನು ವೈಟ್ ಟಾಪಿಂಗ್ ರಸ್ತೆಗಳನ್ನಾಗಿ ಅಭಿವೃದ್ಧಿಪಡಿಸಲು ಪ್ರಸ್ತಾಪಿಸಲಾಗಿರುತ್ತದೆ. ಈ ಸಂಬಂಧ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.<br><br>3) ರಾಜ್ಯ ಸರ್ಕಾರದ 2023-24ನೇ ಸಾಲಿನ ಅಯವ್ಯಯದ ಕಂಡಿಕೆ (221) ರಲ್ಲಿ ಬೆಂಗಳೂರು ನಗರದಲ್ಲಿ ಅತಿ ಹೆಚ್ಚಿನ ವಾಹನ ದಟ್ಟಣೆಯ ಒಟ್ಟು 83 ಕಿ.ಮೀ. ಉದ್ದದ 09 ಪ್ರಮುಖ ರಸ್ತೆಗಳನ್ನು (High Density Corridor) ಒಟ್ಟು ರೂ.273.00 ಕೋಟಿಗಳ ಮೊತ್ತಕ್ಕೆ ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ. |

| | | |
|---|---|---|
| | | 4) ಈ ಹಿಂದೆ 2022–23ನೇ ಸಾಲಿನ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ"ಯ ಅನುದಾನ ಹಂಚಿಕೆಯಲ್ಲಿ ಆಗಿದ್ದ ತಾರತಮ್ಯವನ್ನು ಸರಿದೂಗಿಸಲು ದಿನಾಂಕ: 07–10–2023ರ ಆದೇಶದಲ್ಲಿ ಕೆಲವು ವಿಧಾನ ಸಭಾ ಕ್ಷೇತ್ರಗಳಿಗೆ ರೂ.40.00 ಕೋಟಿಗಳಂತೆ ಪುನರ್ ವಿಂಗಡಣೆ ಮಾಡಲಾಗಿರುತ್ತದೆ.<br><br>5) ಬಿಬಿಎಂಪಿ ವತಿಯಿಂದ 2023–24ನೇ ಸಾಲಿನಲ್ಲಿ ಪ್ರತಿ ವಾರ್ಡ್‌ಗೆ ರೂ.75.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಉಳಿಕೆ ಇಂಜಿನಿಯರಿಂಗ್ ವಿಭಾಗದ ಇತರೆ ಶೀರ್ಷಿಕೆ ಅಡಿಯಲ್ಲಿ ಅನುದಾನವನ್ನು ಹಂಚಿಕೆ ಮಾಡುವ ಕ್ರಮ ಜಾರಿಯಲ್ಲಿರುತ್ತದೆ. |

ನಅಇ 412 ಎಂಎಸ್‌ವೈ 2023

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ